ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1591
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಳೆದ 10 ವರ್ಷಗಳಿಂದ ಕೆ.ಆರ್.ಇ.ಐ.ಎಸ್ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಾವಳಿ ಪ್ರಕಾರ ಶಿಕ್ಷಕರುಗಳಿಗೆ 50:50 ರಂತೆ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ಅವಕಾಶ ಕಲ್ಪಿಸಲಾಗಿರುತ್ತದೆ. ಶಿಕ್ಷಕರುಗಳು ಮಾನ್ಯ ಉಚ್ಛ ನ್ಯಾಯಾಲಯ, ಧಾರವಾಡ ಪೀಠ ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 107705-709/ 2018 & 108366-369/2018(EDN) ರಂತೆ ಪ್ರಕರಣ ದಾಖಲಿಸಿ ಸಹ ಶಿಕ್ಷಕರುಗಳಿಗೆ ಜಾರಿಯಲ್ಲಿರುವ ಶೇ.50:50ರ ಅನುಪಾತದಲ್ಲಿ ಪ್ರಾಂಶುಪಾಲರ ಹುದ್ದೆಗೆ ಭರ್ತಿ ಮಾಡುವುದರ ಬದಲಾಗಿ ಶೇ 75:25 (ಬಡ್ತಿ:ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಕೋರಿರುತ್ತಾರೆ. ಸದರಿ ಪ್ರಕರಣವನ್ನು ಆಲಿಸಿದ ಮಾನ್ಯ ಉಚ್ಛನ್ಯಾಯಾಲಯವು ದಿನಾಂಕ:25.01.2019ರಲ್ಲಿ ಆದೇಶ ನೀಡಿ, ಸಹ ಶಿಕ್ಷಕರುಗಳ ಹುದ್ದೆಯಿಂದ ಮುಂಬಡ್ತಿ ಮತ್ತು ನೇರ ನೇಮಕಾತಿಯನ್ನು ಶೇ.75:25 (ಬಡ್ತಿ: ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಆದೇಶಿಸಿದೆ. ಅದರಂತೆ ಸರ್ಕಾರದ ಆದೇಶ ಸಂಖ್ಯೆ : ಸಕಇ 19 ಮೊದೇಶಾ 2019, ದಿನಾಂಕ: 22.07.2019ರಲ್ಲಿ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ 75:25 (ಬಡ್ತಿ:ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ಸಮಗ್ರ ತಿದ್ದುಪಡಿಯಲ್ಲಿ ಸೇರ್ಪಡೆ ಮಾಡಿ ಮಂಜೂರಾತಿ ನೀಡಿ ಆದೇಶಿಸಲಾಗಿದೆ. ಅದರಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ: 13.11.2020 ರಂದು ಪ್ರಕಟಿಸಲಾಗಿರುತ್ತದೆ.
ಆ)	ಬಂದಿದ್ದಲ್ಲಿ, ಬಡ್ತಿಯ ವಿಳಂಬಕ್ಕೆ ಕಾರಣಗಳೇನು;	

		ದಿನಾಂಕ 27.01.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಹೈದರಾಬಾದ್-ಕರ್ನಾಟಕ ಮೀಸಲಾತಿ ಹಾಗೂ ರೋಸ್ಟರ್ ಮೀಸಲಾತಿಗೆ ಕುರಿತಂತೆ ಹೈದರಾಬಾದ್-ಕರ್ನಾಟಕ ವಿಶೇಷ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಕ್ರಮವಾಗಿ ಸ್ಪಷ್ಟ ಅಭಿಪ್ರಾಯ ಪಡೆದು ಶಿಕ್ಷಕರಿಗೆ ಮುಂಬಡ್ತಿ ನೀಡಲು ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ. ಆದರಂತೆ ಹೈದರಾಬಾದ್-ಕರ್ನಾಟಕ ಮೀಸಲಾತಿ ಹಾಗೂ ರೋಸ್ಟರ್ ಮೀಸಲಾತಿಗೆ ಕುರಿತಂತೆ ಹೈದರಾಬಾದ್-ಕರ್ನಾಟಕ ವಿಶೇಷ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯಲಾಗಿರುತ್ತದೆ. 2011 ಮತ್ತು ನಂತರದ ವಿವಿಧ ಸರ್ಕಾರದ ಆದೇಶಗಳಲ್ಲಿ ಕಾಲಕಾಲಕ್ಕೆ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಆದೇಶಿಸಲಾಗಿರುತ್ತದೆ. ಸಂಘದ ಕೇಂದ್ರ ಕಛೇರಿ ಹಾಗೂ ವಸತಿ ಶಾಲೆ/ ಕಾಲೇಜುಗಳಿಗೆ 2011 ರ ನಂತರ ಮಂಜೂರಾಗಿರುವ ಹುದ್ದೆಗಳನ್ನು ಸೇರ್ಪಡೆಗೊಳಿಸಿ, ದಿನಾಂಕ 24.08.2021 ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿದೆ. ಸದರಿ ಕರಡು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿ ದಿನಾಂಕ: 16.02.2022 ರಂದು ಅಂತಿಮ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿದೆ. ಈ ಹಿನ್ನೆಲೆಯಲ್ಲಿ ಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ.
ಇ)	ಪೂರ್ಣ ಪ್ರಮಾಣದ ಖಾಯಂ ಪ್ರಾಂಶುಪಾಲರುಗಳು ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು;	490 ವಸತಿ ಶಾಲೆಗಳಲ್ಲಿ ಪೂರ್ಣ ಪ್ರಮಾಣದ ಖಾಯಂ ಪ್ರಾಂಶುಪಾಲರುಗಳು ಇರುವುದಿಲ್ಲ.
ಈ)	ಖಾಯಂ ಪ್ರಾಂಶುಪಾಲರು ಇಲ್ಲದೇ ಇರುವುದರಿಂದ ವಸತಿ ಶಾಲೆಗಳ ಆಡಳಿತಾತ್ಮಕ ಮತ್ತು ಶೈಕ್ಷಣಿಕವಾಗಿ ಅನಾನುಕೂಲತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಆಯಾ ವಸತಿ ಶಾಲೆಗಳಲ್ಲಿನ ಶಿಕ್ಷಕರನ್ನು ಜೇಷ್ಠತೆ ಆಧಾರದ ಮೇಲೆ ಪ್ರಾಂಶುಪಾಲರ ಹುದ್ದೆಗೆ ನಿಯೋಜಿಸಿದ್ದು, ಆಡಳಿತಾತ್ಮಕ ಮತ್ತು ಶೈಕ್ಷಣಿಕವಾಗಿ ಅನಾನುಕೂಲತೆ ಉಂಟಾಗದಂತೆ ನೋಡಿಕೊಳ್ಳಲಾಗುತ್ತಿದೆ.

ಉ)	ಖಾಯಂ ಪ್ರಾಂಶುಪಾಲರ ನೇಮಕದಿಂದ ಸುಗಮ ಆಡಳಿತ ವ್ಯವಸ್ಥೆ ಸಾಗುವುದರಿಂದ ಯಾವ ಕಾಲಮಿತಿಯಲ್ಲಿ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು? (ವಿವರಣೆಯೊಂದಿಗೆ ಮಾಹಿತಿ ಒದಗಿಸುವುದು)	ದಿನಾಂಕ:16.02.2022 ರಂದು ಸಂಘದ ವೃಂದ ಮತ್ತು ನೇಮಕಾತಿಗಳ ನಿಯಮಗಳ ತಿದ್ದುಪಡಿಗಳು 2021 ಪ್ರಕಟಿಸಿದ್ದು, ವೃಂದ ಮತ್ತು ನೇಮಕಾತಿಗಳ ನಿಯಮಗಳ ತಿದ್ದುಪಡಿಗಳನ್ವಯ ಸಹ ಶಿಕ್ಷಕರುಗಳಿಗೆ ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಶೀಘ್ರದಲ್ಲಿ ಬಡ್ತಿ ನೀಡಲಾಗುವುದು.

ಸಕಇ 150 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು